**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2668
ಮಾನ್ಯ ಸದಸ್ಯರ ಹೆಸರು : ಶ್ರೀ ಕುಶಾಲಪ್ಪ ಎಂ.ಪಿ
ಉತ್ತರಿಸುವ ದಿನಾಂಕ : 25-03-2022
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯ ಮಡಿಕೇರಿ ಮತ್ತು ವಿರಾಜಪೇಟೆ ತಾಲ್ಲೂಕುಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ವಿದ್ಯಾರ್ಥಿ ನಿಲಯಗಳ ದುರಸ್ತಿ ಕಾಮಗಾರಿಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; (ವಿವರ ನೀಡುವುದು) | ಕಳೆದ ಮೂರು ವರ್ಷಗಳಿಗೆ ಸಂಬಂಧಿಸಿದಂತೆ 2019-20 ನೇ ಸಾಲಿನಲ್ಲಿ ಕೊಡಗು ಜಿಲ್ಲೆಯ ಮಡಿಕೇರಿ ಮತ್ತು ವಿರಾಜಪೇಟೆ ತಾಲ್ಲೂಕುಗಳಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಡೆಸುತ್ತಿರುವ ಪರಿಶಿಷ್ಟ ಜಾತಿ ಸರ್ಕಾರಿ ವಿದ್ಯಾರ್ಥಿ ನಿಲಯಗಳಲ್ಲಿ ಅಗತ್ಯ ದುರಸ್ತಿ/ ಉನ್ನತೀಕರಣ ಕಾಮಗಾರಿಗಳನ್ನು ಕೈಗೊಳ್ಳಲು ರೂ.139.15 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ. |
| ಆ) | ಸದರಿ ತಾಲ್ಲೂಕುಗಳಿಗೆ ಹೊಸದಾಗಿ ಎಷ್ಟು ವಿದ್ಯಾರ್ಥಿ ನಿಲಯಗಳು ಮಂಜೂರಾಗಿವೆ ಹಾಗೂ ಅವುಗಳ ಕಾಮಗಾರಿ ಯಾವ ಹಂತದಲ್ಲಿದೆ; (ವಿವರ ನೀಡುವುದು) | ಸದರಿ ತಾಲ್ಲೂಕುಗಳಿಗೆ ಕಳೆದ ಮೂರು ವರ್ಷಗಳಿಂದ ಹೊಸದಾಗಿ ಯಾವುದೇ ವಿದ್ಯಾರ್ಥಿ ನಿಲಯಗಳು ಮಂಜೂರಾಗಿರುವುದಿಲ್ಲ. |
| ಇ) | ಕಳೆದ 3 ವರ್ಷಗಳಿಂದ ವಿದ್ಯಾರ್ಥಿ ನಿಲಯಗಳ ನಿರ್ಮಾಣಕ್ಕಾಗಿ ಒಟ್ಟು ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು) | ಸದರಿ ತಾಲ್ಲೂಕುಗಳಲ್ಲಿ ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ಈ ಕೆಳಕಂಡ ವಿದ್ಯಾರ್ಥಿ ನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲಾಗಿರುತ್ತದೆ.<br>1. ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯ, ಮಡಿಕೇರಿ ಟೌನ್ ರೂ.425.00 ಲಕ್ಷಗಳು. (2018-19)<br>2. ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯ, ಪಾಲಿಬೆಟ್ಟ, ವಿರಾಜಪೇಟೆ ತಾಲ್ಲೂಕು- ರೂ.198.50 ಲಕ್ಷಗಳು. (2019-20) |
| ಈ) | ಹೊಸದಾಗಿ ಡಾ॥ಬಿ.ಆರ್.ಅಂಬೇಡ್ಕರ್ ಸಮುದಾಯ ಭವನ ನಿರ್ಮಿಸಲು ಎರಡು ಕ್ಷೇತ್ರಗಳಿಂದ ಒಟ್ಟು ಎಷ್ಟು ಅರ್ಜಿಗಳು ಬಂದಿವೆ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು? (ವಿವರ ನೀಡುವುದು) | ಪ್ರಸಕ್ತ ಸಾಲಿನಲ್ಲಿ ವಿರಾಜಪೇಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ ಈ ಕೆಳಕಂಡ ಸ್ಥಳಗಳಲ್ಲಿ, ಡಾ॥ಬಿ.ಆರ್.ಅಂಬೇಡ್ಕರ್ ಸಮುದಾಯ ಭವನಗಳ ನಿರ್ಮಾಣಕ್ಕಾಗಿ ಅನುದಾನ ಬಿಡುಗಡೆ ಕೋರಿ ಪ್ರಸ್ತಾವನೆಗಳು ಸ್ವೀಕೃತವಾಗಿದ್ದು, ಪರಿಶೀಲನೆಯಲ್ಲಿದೆ. |

| | | |
|---|---|---|
| | | 1. ಅಮ್ಮತಿ ಹೋಬಳಿ – ರೂ.75.00 ಲಕ್ಷಗಳು<br>2. ಬಳುಗುಂದ – ರೂ.20.00 ಲಕ್ಷಗಳು<br>3. ಚೆನ್ನಯ್ಯನಕೋಟೆ – ರೂ.20.00 ಲಕ್ಷಗಳು<br>ಮುಂದುವರೆದು, ಮಡಿಕೇರಿ ವಿಧಾನಸಭಾ ಕ್ಷೇತ್ರ, ಸೋಮವಾರಪೇಟೆ ತಾಲ್ಲೂಕಿನ ಶನಿವಾರಸಂತೆ ಹೋಬಳಿಯಲ್ಲಿ ಡಾ॥ಬಿ.ಆರ್.ಅಂಬೇಡ್ಕರ್ ಸಮುದಾಯ ಭವನಗಳ ನಿರ್ಮಾಣಕ್ಕೆ ರೂ.75.00 ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಕೋರಿ ಪ್ರಸ್ತಾವನೆ ಆಯುಕ್ತರು, ಸಮಾಜ ಕಲ್ಯಾಣ ಇಲಾಕೆ ಇವರ ಹಂತದಲ್ಲಿ ಸ್ವೀಕೃತವಾಗಿದ್ದು, ಸದರಿ ಪ್ರಸ್ತಾವನೆ ಸ್ವೀಕೃತವಾದ ನಂತರ ಪರಿಶೀಲಿಸಲಾಗುವುದು. |

ಸಕಇ 246 ಪಕವಿ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು.